## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 220 (2137)
ಸದಸ್ಯರ ಹೆಸರು : ಶ್ರೀ ಎಸ್. ರವಿ
(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು
ಉತ್ತರಿಸುವ ದಿನಾಂಕ : 25.03.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿಯನ್ನು ನೂತನ ತಾಲ್ಲೂಕು ಎಂದು ಘೋಷಣೆ ಮಾಡಿ 02 ವರ್ಷಗಳಾಗಿದ್ದು, ಇಲ್ಲಿ ತಾಲ್ಲೂಕು ಮಟ್ಟದ ಕಛೇರಿಗಳನ್ನು ನಿರ್ಮಾಣ ಮಾಡಲು ಸ್ಥಳಗಳನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ, ಯಾವ ಯಾವ ಕಛೇರಿಗಳಿಗೆ ಎಲ್ಲೆಲ್ಲಿ ಮತ್ತು ಎಷ್ಟು ಜಾಗವನ್ನು ಗುರುತಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಹಾರೋಹಳ್ಳಿ ತಾಲ್ಲೂಕು ನೂತನ ತಾಲ್ಲೂಕು ಆಗಿ ರಚನೆಯಾಗಿರುತ್ತದೆ. ಹಾರೋಹಳ್ಳಿ ತಾಲ್ಲೂಕು, ಮರಳವಾಡಿ ಹೋಬಳಿ, ಚಿಕ್ಕಸಾದೇನಹಳ್ಳಿ ಗ್ರಾಮದ ಸರ್ವೆ ನಂ.14ರಲ್ಲಿ 4-25 ಎ/ಗು ಜಮೀನಿನಲ್ಲಿ ತಾಲ್ಲೂಕು ಪ್ರಜಾಸೌಧ ನಿರ್ಮಾಣ ಮಾಡಲು ಗುರುತಿಸಲಾಗಿರುತ್ತದೆ. ಸದರಿ ಕಟ್ಟಡದಲ್ಲಿ ತಾಲ್ಲೂಕು ಕಛೇರಿ, ಉಪ ನೋಂದಣಾಧಿಕಾರಿಗಳ ಕಛೇರಿ ಮತ್ತು ತಾಲ್ಲೂಕು ಖಜಾನೆ ಕಛೇರಿಗಳಿಗೆ ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ) | ಹಾರೋಹಳ್ಳಿ ನೂತನ ತಾಲ್ಲೂಕಿನ ಆಡಳಿತಸೌಧ (ಮಿನಿ ವಿಧಾನಸೌಧ) ಕಛೇರಿ ನಿರ್ಮಾಣಕ್ಕಾಗಿ ಮತ್ತು ಮೂಲಭೂತ ಸೌಕರ್ಯಗಳಿಗಾಗಿ ಎಷ್ಟು ಅನುದಾನ ಮೀಸಲಿರಿಸಲಾಗಿದೆ; ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ಕಛೇರಿಗೆ ಕಲ್ಪಿಸುತ್ತಿರುವ ಮೂಲಭೂತ ಸೌಕರ್ಯಗಳೇನು? (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಕಂಇ 25 ಡಬ್ಲ್ಯೂಬಿಆರ್ 2023, ದಿನಾಂಕ:07.01.2025 ಹಾಗೂ 12.12.2025ರನ್ವಯ ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿ ತಾಲ್ಲೂಕಿನಲ್ಲಿ ಪ್ರಜಾಸೌಧ, ಹಾರೋಹಳ್ಳಿ ತಾಲ್ಲೂಕು ಆಡಳಿತ ಕೇಂದ್ರ ಕಟ್ಟಡವನ್ನು Type-A Design/ಮಾದರಿಯಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ (Fully Furnished) ರೂ.8.60 ಕೋಟಿಗಳ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ ಹಾಗೂ ಸದರಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಕಂಇ 25 ಡಬ್ಲ್ಯೂಬಿಆರ್ 2023, ದಿನಾಂಕ:18.03.2026ರನ್ವಯ ರೂ.200.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗಿದೆ. |

**ಕಡತ ಸಂಖ್ಯೆ:ಕಂಇ 59 ಎಮ್ಎಸ್‌ಟಿ 2026**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು



Scanned with OKEN Scanner